ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೮

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

**ಬುಧವಾರ, ದಿನಾಂಕ: ೧೬ನೇ ಜುಲೈ, ೨೦೧೪**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

### ಕಂದಾಯ ಸರ್ವೇಯರ್ ಹುದ್ದೆಗಳ ನೇಮಕಾತಿ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೬ (೧೪೧೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ಸರ್ವೇಯರ್‌ಗಳನ್ನು ನೇಮಕಾತಿ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಆ) ೨೦೧೪–೧೫ರಲ್ಲಿ ಎಷ್ಟು ಸರ್ವೇಯರ್‌ಗಳನ್ನು ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆ ;

(ಇ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಈಗಾಗಲೇ ಎಷ್ಟು ಸರ್ವೇಯರ್‌ಗಳನ್ನು ನೇಮಕ ಮಾಡಲಾಗಿದೆ ?

## ಕೆರೆಗಳ ಪುನಃಶ್ಚೇತನ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೭ (೧೩೯೨) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ;(ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ನಿರ್ಜೀವ ಸ್ಥಿತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅವುಗಳ ಪುನಃಶ್ಚೇತನಕ್ಕೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ? (ತಿಳಿಸುವುದು)

## ಸತ್ಯಮಂಗಲ ಕೆರೆಗೆ ನೀರು ತುಂಬಿಸುವುದು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೮ (೧೪೦೪) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನದ ಸತ್ಯಮಂಗಲ ಕೆರೆ ಅಭಿವೃದ್ಧಿಗೆ ಖರ್ಚು ಮಾಡಿರುವ ಮೊಬಲಗೆಷ್ಟು ; ಕಾಮಗಾರಿ ಯಾವ ಹಂತದಲ್ಲಿರುತ್ತದೆ ;

(ಆ) ಸತ್ಯಮಂಗಲ ಕೆರೆಯನ್ನು ಸೌಂದರ್ಯೀಕರಣಗೊಳಿಸುತ್ತಿದ್ದರೂ, ಕೆರೆಯಲ್ಲಿ ನೀರಿಲ್ಲದೇ ಅರ್ಥಹೀನವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಹಿಂದೆ ಅಲ್ಪಮಳೆಗೆ ತುಂಬುತ್ತಿದ್ದ ಕೆರೆಯು ಉತ್ತಮ ಮಳೆಗಾಲದಲ್ಲೂ ಕಳೆದ ನಾಲ್ಕು ವರ್ಷಗಳಿಂದ ತುಂಬದಿರಲು ಕಾರಣವೇನು ;

(ಈ) ಕೆರೆಯಲ್ಲಿ ನೀರಿಲ್ಲದಿರುವುದರಿಂದ ಈ ಭಾಗದ ಅಂತರ್ಜಲಮಟ್ಟ ಕುಸಿದಿದ್ದು ಕುಡಿಯುವ ನೀರಿಗೆ ತೊಂದರೆಯಾಗಿದ್ದು, ಮಳೆಗಾಲದಲ್ಲಿ ಈ ಕೆರೆಗೆ ಕೊಳವೆಗಳ ಮೂಲಕ ನೀರು ತುಂಬಿಸಲು ಕೈಗೊಂಡಿರುವ ಕ್ರಮಗಳೇನು ?

## ಸೈಕ್ಲಿಂಗ್ ಸ್ಟೇಡಿಯಂ ನಿರ್ಮಾಣ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೯ (೧೩೯೬) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

> ಬಿಜಾಪುರ ನಗರದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಸೈಕ್ಲಿಂಗ್ ಸ್ಟೇಡಿಯಂ (Cycling Velodrome) ಸರ್ಕಾರದಿಂದ ಮಂಜೂರಾಗಿದ್ದರೂ, ಕಾಮಗಾರಿ ಪ್ರಾರಂಭಿಸದಿರಲು ಕಾರಣ ಏನು ; ಯಾವಾಗ ಪ್ರಾರಂಭಿಸಲಾಗುವುದು ಎಷ್ಟು ಕಾಲಮಿತಿಯಲ್ಲಿ ಮುಗಿಸಲಾಗುವುದು ?

## ಅಂಗವಿಕಲರಿಗೆ ಕ್ರೀಡಾ ಪ್ರೋತ್ಸಾಹ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೬೦ (೧೪೪೭) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಂಗವಿಕಲರು, ಬುದ್ಧಿ ಮಾಂದ್ಯರು ಹಾಗೂ ಹಿರಿಯ ನಾಗರಿಕರು ಕ್ರೀಡೆಗಳಲ್ಲಿ ತೊಡಗಿಕೊಳ್ಳುವಂತೆ ಪ್ರೋತ್ಸಾಹಿಸಲು ಸರ್ಕಾರದ ವತಿಯಿಂದ ರಾಜ್ಯ, ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಯಾವ ಯಾವ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಕಳೆದ ಎರಡು ವರ್ಷಗಳ ಪ್ರತ್ಯೇಕ ವಿವರ ನೀಡುವುದು ;

(ಆ) ಇವರುಗಳಿಗೆ ಕ್ರೀಡೆಯಲ್ಲಿ ಉತ್ತೇಜಿಸಲು ಈ ವರ್ಷ ತೊಡಗಿಸಲಾಗಿರುವ ಹಣವೆಷ್ಟು ; ಈ ಸಂಬಂಧ ಹಣದ ಕೊರತೆ ಇರುವುದು ನಿಜವೇ ?

## ಖಾಸಗಿ ಐ.ಟಿ.ಐ. ಗಳನ್ನು ಅನುದಾನಕ್ಕೆ ಒಳಪಡಿಸುವುದು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೨೬೧ (೧೩೯೧) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೆಲವು ಖಾಸಗಿ ಐ.ಟಿ.ಐ. ಸಂಸ್ಥೆಗಳು ಪ್ರಾರಂಭವಾಗಿ ಏಳು ವರ್ಷ ಕಳೆದಿದ್ದು, ವೇತನ ಅನುದಾನ ಪಡೆಯಲು ಎಲ್ಲ ಅರ್ಹತೆ ಹೊಂದಿರುವ ಸಂಸ್ಥೆಗಳು ಎಷ್ಟಿವೆ ; ಇವುಗಳ ಹೆಸರು, ವಿಳಾಸ ವೇತನಾನುದಾನಕ್ಕೆ ಒಳಪಡಬೇಕಾಗಿರುವ ನೌಕರರ ಸಂಖ್ಯೆ ಮುಂತಾದ ವಿವರ ನೀಡುವುದು ;

(ಆ) ಈ ಸಂಸ್ಥೆಗಳಿಗೆ ಯಾವಾಗಿನಿಂದ ವೇತನಾನುದಾನ ನೀಡಲಾಗುವುದು ?

**ಅಕಾಲಿಕ ಮಳೆಯಿಂದ ಹಾನಿಯಾದ ಬೆಳೆಗಳು**

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೨೬೨ (೧೩೯೪) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಕಳೆದ ಮಾರ್ಚ್ ತಿಂಗಳಲ್ಲಿ ಆಲಿಕಲ್ಲು ಮಳೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ಜಿಲ್ಲೆ ಯಾವ ತಾಲ್ಲೂಕು ಮತ್ತು ಎಷ್ಟು ಪ್ರಮಾಣದಲ್ಲಿ ಮಳೆಯಾಗಿದೆ ; (ವಿವರಿಸುವುದು)

(ಆ) ಅಕಾಲಿಕ ಆಲಿಕಲ್ಲು ಮಳೆಯಿಂದ ಹಾನಿಯಾದ ಬೆಳೆಗಳು ಯಾವುವು ; ಬೆಳೆಗಳ ಹಾನಿಯ ಕುರಿತು ಇಲಾಖೆಯ ಅಧಿಕಾರಿಗಳಿಂದ ಸಮೀಕ್ಷೆ ನಡೆಸಲಾಗಿದೆಯೇ ; ಎಷ್ಟು ರೈತರು ಬೆಳೆ ಹಾನಿಯಿಂದ ತೊಂದರೆಗೆ ಒಳಪಟ್ಟಿದ್ದಾರೆ ; (ವಿವರಿಸುವುದು)

(ಇ) ರೈತರ ಬೆಳೆಯ ಹಾನಿಗೆ ಪರಿಹಾರ ನೀಡಲು ಸರ್ಕಾರ ಯೋಚಿಸಿದೆಯೇ ; ಹಾಗಿದ್ದಲ್ಲಿ, ಪ್ರತಿ ಹೆಕ್ಟೇರ್/ಎಕರೆ ಪ್ರದೇಶಕ್ಕೆ ನಿಗದಿಪಡಿಸಿದ ಪರಿಹಾರದ ಮೊತ್ತವೆಷ್ಟು ; ತೋಟಗಾರಿಕೆ ಬೆಳೆ, ದೀರ್ಘಾವಧಿ ಮತ್ತು ಅಲ್ಪಾವಧಿ ಬೆಳೆಗಳ ವಿವರ ಪ್ರತ್ಯೇಕವಾಗಿ ನೀಡುವುದು ;

(ಈ) ಸಂತ್ರಸ್ತ ರೈತರಿಗೆ ಬೆಳೆ ಹಾನಿಯ ಪರಿಹಾರ ನೀಡುವುದು ಯಾವಾಗ ; ಸರ್ಕಾರ ರೈತರ ಸಂಕಷ್ಟಕ್ಕೆ ಶೀಘ್ರ ಸ್ಪಂದಿಸುವುದೆ ? (ವಿವರಿಸುವುದು)

## ಯುವಜನರ ಅಭಿವೃದ್ಧಿಗಾಗಿ ಅನುದಾನ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬೩ (೧೪೫೧) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಯುವಜನ ಮತ್ತು ಕ್ರೀಡಾ ಇಲಾಖೆಗೆ ನೀಡಿರುವ ಅನುದಾನ ಎಷ್ಟು ;

(ಆ) ಈ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಉಪಯೋಗಿಸಲಾಗುತ್ತದೆ ;

(ಇ) ಯುವ ಜನರ ಅಭಿವೃದ್ಧಿಗೆ ನೀಡಲಾಗುವ ಈ ಅನುದಾನ ಸಾಕಾಗುತ್ತಿಲ್ಲ ಎಂಬ ದೂರುಗಳು ಬಂದಿವೆಯೇ ; ಅದಕ್ಕಾಗಿ ಮುಂದಿನ ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ಒದಗಿಸಲಾಗುವುದೇ ;

(ಈ) ಕಳೆದ ಮೂರು ವರ್ಷಗಳಲ್ಲಿ ನೀಡಲಾದ ಅನುದಾನ ಎಷ್ಟು ? (ವಿವರಗಳೊಂದಿಗೆ)

## ಪರಿಸರ ಸಂರಕ್ಷಣೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೨೬೪ (೧೪೩೦) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಸರ ಸಂರಕ್ಷಣೆ ದೃಷ್ಟಿಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ;

(ಆ) ಇದರಲ್ಲಿ ಶಿಕ್ಷಣ ಇಲಾಖೆಯ ಸಹಯೋಗದಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳು ಯಾವುವು ;

(ಇ) ರಾಜ್ಯದ ಎಲ್ಲಾ ಶಾಲೆಗಳಲ್ಲಿ ಇಕೋ ಕ್ಲಬ್‌ಗಳ ಮೂಲಕ ಯಾವುದಾದರೂ ಯೋಜನೆಗಳನ್ನು ಕೈಗೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಅರಣ್ಯ ಇಲಾಖೆಯಲ್ಲಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ;

(ಉ) ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆಗಳ ದರ್ಜೆವಾರು ವಿವರ ನೀಡುವುದು)

(ಊ) ಭರ್ತಿ ಮಾಡಿಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಒಳಾಂಗಣ ಮತ್ತು ಹೊರಾಂಗಣ ಕ್ರೀಡಾಂಗಣಗಳು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೬೫ (೧೪೧೨) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕ್ರೀಡಾಂಗಣಗಳ ವ್ಯವಸ್ಥೆ ಇಲ್ಲದೇ ಕ್ರೀಡಾಪಟುಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಕ್ರೀಡಾಂಗಣ ಮತ್ತು ಒಳಕ್ರೀಡಾಂಗಣಗಳ ವ್ಯವಸ್ಥೆ ಇದೆ ;

(ಇ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಹೊಸ ಕ್ರೀಡಾಂಗಣ ಮತ್ತು ಒಳಕ್ರೀಡಾಂಗಣ ನಿರ್ಮಿಸಲಾಗುತ್ತಿದೆ ;

(ಈ) ಸದರಿ ಹೊಸ ಕ್ರೀಡಾಂಗಣಗಳ ನಿರ್ಮಾಣಕ್ಕೆ ಮಾಡಲಾಗಿರುವ ವೆಚ್ಚವೆಷ್ಟು ; (ಪ್ರತಿ ಕ್ರೀಡಾಂಗಣಗಳ ವಿವರ ನೀಡುವುದು)

(ಉ) ಇವುಗಳ ಪೈಕಿ ಎಷ್ಟು ಕ್ರೀಡಾಂಗಣಗಳು ಪೂರ್ಣಗೊಂಡಿವೆ ; ಪೂರ್ಣಗೊಂಡಿರುವ ಕ್ರೀಡಾಂಗಣಗಳು ಯಾವುವು ; ಪೂರ್ಣಗೊಂಡಿರದ ಕ್ರೀಡಾಂಗಣಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ವಿವರಣೆ ಒದಗಿಸುವುದು)

## ಬಗರ್‌ಹುಕುಂ ಸಾಗುವಳಿ ಚೀಟಿ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೬೬ (೧೪೫೬.) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿಗದಿತ ಸಮಯದಲ್ಲಿ ನಮೂನೆ ೫೦–೫೩ನ್ನು ಸಲ್ಲಿಸಿದ್ದರೂ, ಬಗರ್‌ಹುಕುಂ ಸಾಗುವಳಿದಾರರಿಗೆ ಸಾಗುವಳಿ ಚೀಟಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನೀಡದಿರುವುದಕ್ಕೆ ಕಾರಣವೇನು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಸ್ತಿತ್ವಕ್ಕೆ ಬರುವ ಮುನ್ನವೇ ಅರ್ಜಿ ನಮೂನೆ ೫೦–೫೩ನ್ನು ಸಲ್ಲಿಸಿದ್ದರೂ, ಈಗ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ (Outer Boundary) ೧೮ ಕಿ.ಮೀ. ವ್ಯಾಪ್ತಿಯಲ್ಲಿ ಸಾಗುವಳಿ ಚೀಟಿ ನೀಡಲು ಬರುವುದಿಲ್ಲವೆಂದು ಹೇಳುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ ; ಕಾರಣವೇನು ; (ವಿವರ ನೀಡುವುದು)

(ಇ) ಕಂದಾಯ ಇಲಾಖೆಯಿಂದ ಭೂ ಮಾಪನ ಇಲಾಖೆಯನ್ನು ಪ್ರತ್ಯೇಕಿಸಲಾಗುತ್ತಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ; ಪ್ರತ್ಯೇಕಿಸುವುದಾದರೆ, ಇದರ ಸಾಧಕ ಬಾಧಕಗಳೇನು ?

## ಮನಸ್ವಿನಿ, ಮೈತ್ರಿ ಯೋಜನೆಯ ಅನುಷ್ಠಾನ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬೭ (೧೩೯೫) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಪ್ರಸ್ತುತ ಸಾಲಿನಿಂದ ಆರಂಭಿಸಿರುವ ಮನಸ್ವಿನಿ ಮತ್ತು ಮೈತ್ರಿ ಯೋಜನೆಗೆ ಆಯವ್ಯಯದಲ್ಲಿ ನಿಗದಿಪಡಿಸಿರುವ ಹಣವೆಷ್ಟು ;

(ಆ) ಈ ಯೋಜನೆಯಿಂದ ಮಾಸಿಕ ಪಿಂಚಣಿ ಕೋರಿ ಇಲ್ಲಿಯವರೆಗೆ ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ;

(ಇ) ಈ ಜಿಲ್ಲೆಯಲ್ಲಿ ಎಷ್ಟು ಫಲಾನುಭವಿಗಳಿಗೆ ಪಿಂಚಣಿಯನ್ನು ಮಂಜೂರು ಮಾಡಲಾಗಿದೆ ;

(ಈ) ಈ ಯೋಜನೆಯಲ್ಲಿ ಪಿಂಚಣಿಗೆ ಕೋರಿ ಬರುವ ಅರ್ಜಿಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಸರ್ಕಾರವು ಜಿಲ್ಲಾಧಿಕಾರಿಯವರಿಗೆ ಯಾವ ನಿರ್ದೇಶನವನ್ನು ನೀಡಿದೆ ;

(ಉ) ಸರ್ಕಾರದಿಂದ ಈ ಯೋಜನೆಯ ಉಸ್ತುವಾರಿಯನ್ನು ಯಾರು ವಹಿಸಿಕೊಂಡಿದ್ದಾರೆ ; ಇಲ್ಲಿಯವರೆಗೆ ಈ ಯೋಜನೆಯ ಅನುಷ್ಠಾನದ ಬಗ್ಗೆ ಎಷ್ಟು ಬಾರಿ ಪ್ರಗತಿ ಪರಿಶೀಲನಾ ಸಭೆ ನಡೆದಿದೆ ?

## ಭೂ ಪರಿವರ್ತನೆಯ ಅಕ್ರಮಗಳು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬೮ (೧೪೦೨) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ/ಗ್ರಾಮಾಂತರ ಜಿಲ್ಲೆಗಳಲ್ಲಿನ ಎಷ್ಟು ವಿಸ್ತೀರ್ಣದ ಕಂದಾಯ ಭೂಮಿಯನ್ನು ವಿವಿಧ ಉದ್ದೇಶಗಳಿಗಾಗಿ ಕಳೆದ ೫ ವರ್ಷಗಳಲ್ಲಿ ಭೂ ಪರಿವರ್ತನೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಭೂ ಪರಿವರ್ತನೆಯ ಆದೇಶಗಳನ್ನು ನಮೂದಿಸಿ, ಭೂ ಪರಿವರ್ತನೆಯಾಗದ ಎಷ್ಟು ವಿಸ್ತೀರ್ಣದ ಕಂದಾಯ ಜಮೀನುಗಳನ್ನು ವಿವಿಧ ಉದ್ದೇಶಗಳಿಗಾಗಿ ಮಾರಾಟ/ನೊಂದಣಿ ಮಾಡಿರುವ ಪ್ರಕರಣಗಳು ಬೆಳಕಿಗೆ ಬಂದಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೆಳಕಿಗೆ ಬಂದ ಪ್ರಕರಣಗಳಲ್ಲಿ ಎಷ್ಟು ಸರ್ಕಾರಿ ಅಧಿಕಾರಿ/ನೌಕರರು ಶಾಮೀಲಾಗಿದ್ದಾರೆ ;

(ಈ) ಭೂ ಪರಿವರ್ತನೆಯ ಅಕ್ರಮ ಪ್ರಕರಣಗಳ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

## ವರಾಹಿ ನೀರಾವರಿ ಯೋಜನೆ/ಸ್ವಾಧೀನಪಡಿಸಿಕೊಂಡ ಭೂಮಿ

**ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೬೯ (೧೪೪೫) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವರಾಹಿ ನೀರಾವರಿ ಯೋಜನೆಯಿಂದ ಬಲದಂಡೆ, ಎಡದಂಡೆ ಮತ್ತು ಏತ ನೀರಾವರಿಯ ಮೂಲಕ ಯಾವ ಯಾವ ಗ್ರಾಮಗಳ ಎಷ್ಟು ಎಕರೆ ಕೃಷಿ ಭೂಮಿಗೆ ನೀರನ್ನು ಒದಗಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ ; (ಗ್ರಾಮವಾರು ವಿವರ ನೀಡುವುದು)

(ಆ) ವರಾಹಿ ನೀರಾವರಿ ಯೋಜನೆಯ ಬಲದಂಡೆ, ಎಡದಂಡೆ ಮತ್ತು ಏತ ನೀರಾವರಿ ಕಾಮಗಾರಿಗಳಿಗೆ ಯಾವ ಯಾವ ಗ್ರಾಮಗಳ ಎಷ್ಟು ವಿಸ್ತೀರ್ಣದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ಹಾಗೂ ಎಷ್ಟು ವಿಸ್ತೀರ್ಣದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಬಾಕಿಯಿದೆ ; (ಗ್ರಾಮವಾರು ವಿವರ ನೀಡುವುದು)

(ಇ) ಈ ಎಲ್ಲ ಕಾಮಗಾರಿಗಳಿಗೆ ಭೂಸ್ವಾಧೀನತೆಯಲ್ಲಿ ಸರ್ವೆ ಆಗಿರತಕ್ಕಂತಹ ಭೂಮಿಯ ವಿಸ್ತೀರ್ಣವೆಷ್ಟು ; ಸರ್ವೆ ಆಗಲು ಬಾಕಿ ಇರುವ ಭೂಮಿಯ ವಿಸ್ತೀರ್ಣವೆಷ್ಟು ? (ಗ್ರಾಮವಾರು ವಿವರ ನೀಡುವುದು)

## ನವೆಂಬರ್–೨೦೧೩ರಲ್ಲಿ ನಡೆಸಲಾದ SCVT ಪರೀಕ್ಷೆಯಲ್ಲಿ ಸುಮಾರು ೪೦೦೦ ಅಭ್ಯರ್ಥಿಗಳ ಪರೀಕ್ಷಾ ಫಲಿತಾಂಶವನ್ನು ತಡೆಹಿಡಿದಿರುವುದು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೨೭೦ (೧೩೯೭) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನವೆಂಬರ್–೨೦೧೩ರಲ್ಲಿ ನಡೆಸಲಾದ SCVT ಪರೀಕ್ಷೆಯಲ್ಲಿ ತರಬೇತಿ ಅಪೂರ್ಣಗೊಂಡ ಮತ್ತು ತರಬೇತಿಯೇ ಇಲ್ಲದೆ ನೇರವಾಗಿ ಪ್ರವೇಶ

ಪತ್ರಗಳನ್ನು ವಿತರಿಸಿ ಪರೀಕ್ಷೆಯಲ್ಲಿ ಇಲಾಖೆಯ ಅಧಿಕಾರಿಗಳು ಅವ್ಯವಹಾರ ನಡೆಸಿ, ಸುಮಾರು ೪೦೦೦ ಅಭ್ಯರ್ಥಿಗಳ ಪರೀಕ್ಷಾ ಫಲಿತಾಂಶವನ್ನು ತಡಿಹಿಡಿದಿರುವ ವಿಷಯು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಆ) ಈ ವಿಷಯಕ್ಕೆ ಸಂಬಂಧಿಸಿದಂತೆ ಉಚ್ಛ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ದಾವೆ ಹೂಡಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ ; ಹಾಗಿದ್ದಲ್ಲಿ, ದಾವೆಯನ್ನು ಇತ್ಯರ್ಥಪಡಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ;

(ಇ) ಈ ಹಗರಣದ ಬಗ್ಗೆ ತನಿಖೆ ನಡೆಸಲು **ಸಿ.ಐ.ಡಿ./ಲೋಕಾಯುಕ್ತ** ತನಿಖಾ ಸಂಸ್ಥೆಗಳಿಗೆ ವಹಿಸುವ ಬಗ್ಗೆ ಇಲಾಖೆಯ ಉನ್ನತ ಅಧಿಕಾರಿಗಳ ವತಿಯಿಂದ ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಕೆಯಾಗಿದೆಯೇ ; ಹಾಗಿದ್ದಲ್ಲಿ, ತನಿಖೆಗೆ ವಹಿಸುವ ಬದಲಾಗಿ ಅನಗತ್ಯ ಕಾಲವಿಳಂಬ ಮಾಡುತ್ತಿರುವ ಕಾರಣವೇನು ;

(ಈ) ಇಲಾಖೆಯ ಅಧಿಕಾರಿಗಳು ಮಾಡಿರುವ ಅಧಿಕಾರ ದುರ್ಬಳಕೆಯಿಂದ ಪರೀಕ್ಷಾ ಫಲಿತಾಂಶ ತಡೆಹಿಡಿದಿರುವ ೪೦೦೦ ಅಭ್ಯರ್ಥಿಗಳ ಭವಿಷ್ಯ ಅತಂತ್ರ ಸ್ಥಿತಿಯಲ್ಲಿದ್ದು, ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರದ ನಿಲುವೇನು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 370, ಪ್ರತಿಗಳು– 1500 – ಪಿ.8